ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಸಿಬ್ಬಂದಿ-1/ಉ.ವರ್ಗ/2019-20.

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ: 30/07/2019.

## ಜ್ಞಾಪನ

**ವಿಷಯ:-** ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೂನ್ಯ ದಾಖಲಾತಿ ಹೊಂದಿರುವ ಹಾಗು ಹೆಚ್ಚುವರಿ ಉಪನ್ಯಾಸಕರ ಹುದ್ದೆ ಮಾಹಿತಿಯನ್ನು ಅಪ್‌ಡೇಟ್ ಮಾಡುವ ಬಗ್ಗೆ.

**ಉಲ್ಲೇಖ:-**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007. ದಿನಾಂಕ: 29/11/2017.
2. ಈ ಕಚೇರಿ ಪತ್ರ ಸಂಖ್ಯೆ: ಪಪೂಶಿಇ/ಆಡಳಿತ-ಎ/ಹೆ-ಉ. ವರ್ಗ/2019-20. ದಿನಾಂಕ: 26/06/2019.
3. ಈ ಕಚೇರಿ ಜ್ಞಾಪನ ಪತ್ರ ಸಮ ಸಂಖ್ಯೆ ದಿನಾಂಕ: 24/07/2019.

* * *

ಉಲ್ಲೇಖ-1ರ ಸರ್ಕಾರದ ಅಧಿಸೂಚನೆಯಂತೆ, ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚುವರಿ ಉಪನ್ಯಾಸಕರನ್ನು ಗುರುತಿಸಲಾಗಿದೆ. ಉಲ್ಲೇಖ-2ರಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೂನ್ಯ ದಾಖಲಾತಿ ಹೊಂದಿರುವ ವಿಷಯಗಳ ಉಪನ್ಯಾಸಕರ ವಿವರಗಳನ್ನು ಜಿಲ್ಲಾ ಉಪ ನಿರ್ದೇಶಕರಿಂದ ಪಡೆದು ಕ್ರೋಢೀಕರಿಸಲಾಗಿದೆ. ಸದರಿ ಉಪನ್ಯಾಸಕರ ಮಾಹಿತಿಯನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ವೆಬ್‌ಸೈಟ್ www.pue.kar.nic.in ನಲ್ಲಿ ಪ್ರಕಟಿಸಲಾಗಿದ್ದು, ಸದರಿ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ, ದಿನಾಂಕ: 07/08/2019 ರೊಳಗಾಗಿ ಪ್ರಾಚಾರ್ಯರಿಂದ ದೃಢೀಕರಿಸಿ, ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವುದು.

ಜಿಲ್ಲಾ ಉಪ ನಿರ್ದೇಶಕರು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಪಟ್ಟಿಯನ್ನು ಮತ್ತು ಉಪನ್ಯಾಸಕರು/ಪ್ರಾಚಾರ್ಯರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿದ ನಂತರ, ಈ ಹಿಂದೆ ನೀವು ಸಲ್ಲಿಸಿರುವ ವರದಿಯೊಂದಿಗೆ ತಾಳೆ ಮಾಡಿ ಏನಾದರು ಬದಲಾವಣೆ ಇದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ, ದಿನಾಂಕ: 14/08/2019ರ ಒಳಗಾಗಿ ನಿರ್ದೇಶನಾಲಯಕ್ಕೆ ಮುದ್ದಾಂ ಸಲ್ಲಿಸಲು ತಿಳಿಸಿದೆ. *ಮುಂದುವರೆದು ಶೂನ್ಯ ದಾಖಲಾತಿ ಹಾಗು ಹೆಚ್ಚುವರಿ ಹುದ್ದೆಗಳಲ್ಲಿ ಗುರುತಿಸಿರುವ ಉಪನ್ಯಾಸಕರು Karnataka Public School (ಕೆ.ಪಿ.ಎಸ್) ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಮಾಹಿತಿ ನೀಡುವುದು.*

**ಸೂಚನೆ:-**

ಶೂನ್ಯ ದಾಖಲಾತಿ ಹಾಗು ಹೆಚ್ಚುವರಿ ಹುದ್ದೆಗಳಲ್ಲಿ ಗುರುತಿಸಿರುವ ಉಪನ್ಯಾಸಕರು ಕೋರಿಕೆ ಅಥವಾ ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಇವರಿಗೆ:-**

1. ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ – ಅಗತ್ಯ ಕ್ರಮಕ್ಕಾಗಿ.